ಪದವಿ ಕಾಲೇಜುಗಳಲ್ಲಿ ಉಪನ್ಯಾಸಕರ ಕೊರತೆ

1438(2106); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ಸರ್ಕಾರಿ ಪದವಿ ಕಾಲೇಜುಗಳಿಗೆ ಮಂಜೂರಾಗಿರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಎಷ್ಟು;

ಆ) ಈ ಪೈಕಿ ಎಷ್ಟು ಹುದ್ದೆಗಳು ಭರ್ತಿಯಾಗಿವೆ ಮತ್ತು ಹುದ್ದೆಗಳು ಯಾವ ಅವಧಿಯಿಂದ ಖಾಲಿ ಇವೆ; (ಪೂರ್ಣ ವಿವರಗಳನ್ನು ವಿಧಾನಸಭಾ ಕ್ಷೇತ್ರವಾರು ಅಂಕಿ ಅಂಶಗಳೊಂದಿಗೆ ಒದಗಿಸುವುದು)

ಇ) ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಈ) ಖಾಯಂ ಉಪನ್ಯಾಸಕರನ್ನು ಹೊರತುಪಡಿಸಿ ಗುತ್ತಿಗೆ ಆಧಾರ/ ಅರೆಕಾಲಿಕ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; (ಜಿಲ್ಲಾವಾರು ಅಂಕಿ ಅಂಶಗಳನ್ನು ಒದಗಿಸುವುದು)

ಉ) ಇವರುಗಳಿಗೆ ಒದಗಿಸುತ್ತಿರುವ ಸೇವಾ ಭದ್ರತೆಯ ವಿವರಗಳು/ಮಾಸಿಕ ನೀಡುತ್ತಿರುವ ಸಂಬಳ ಮತ್ತು ಇತರೆ ಸೌಲಭ್ಯಗಳೇನು;

ಊ) ಉಪನ್ಯಾಸಕರ ಕೊರತೆ ಇರುವುದರಿಂದ ಅರೆಕಾಲಿಕವಾಗಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರ ಸೇವೆಗಳನ್ನು ಖಾಯಂಗೊಳಿಸುವ ಬಗ್ಗೆ ಸರ್ಕಾರ ಪರಿಶೀಲಿಸುವುದೇ; ಇಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಸಚಿವರು)

ಅ) ಒಟ್ಟು – 7245 ಉಪನ್ಯಾಸಕರ ಹುದ್ದೆಗಳು

ಆ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 4735 ಉಪನ್ಯಾಸಕರು ಕರ್ತವ್ಯ ನಿರ್ವಹಿಸುತ್ತಿದ್ದು, 2510 ಹುದ್ದೆಗಳು 2009 ರಿಂದ ವಯೋನಿವೃತ್ತಿ, ರಾಜೀನಾಮೆ, ಸ್ವ–ಇಚ್ಛಾ ನಿವೃತ್ತಿ, ಮರಣ ಮತ್ತು

ಹೊಸ ಹುದ್ದೆಗಳ ಸೃಜನೆಯಿಂದ ಖಾಲಿಯಿರುತ್ತವೆ. (ವಿಧಾನ ಸಭಾ ಕ್ಷೇತ್ರವಾರು ಅಂಕಿ ಅಂಶಗಳು ವಿವರ ಅನುಬಂಧದಲ್ಲಿ ನೀಡಲಾಗಿದೆ)

ಇ) ಕಾಲೇಜು ಶಿಕ್ಷಣ ಇಲಾಖೆಯ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿಯಿರುವ ಬೋಧಕರ ಹುದ್ದೆಗಳಲ್ಲಿ ಒಟ್ಟು 2160 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ನಿಯಮಾನುಸಾರ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮುಖಾಂತರ ಪಾರದರ್ಶಕವಾಗಿ ಭರ್ತಿ ಮಾಡಲಾಗುತ್ತಿದೆ.

ಈ) ಇಲಾಖೆಯಲ್ಲಿ ಪ್ರಸ್ತುತ ಯಾವುದೇ ಉಪನ್ಯಾಸಕರುಗಳು ಗುತ್ತಿಗೆ/ ಅರೆಕಾಲಿಕ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿಲ್ಲ.

ಉ) ಪ್ರಶ್ನೆ ಉದ್ಭವಿಸುವುದಿಲ್ಲ.

ಊ) ಪ್ರಶ್ನೆ ಉದ್ಭವಿಸುವುದಿಲ್ಲ.

ಕೋಚಿಂಗ್ ಸೆಂಟರ್‌ಗಳು

1439(2107); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ಬೆಂಗಳೂರು ನಗರದಲ್ಲಿ ನೂರಾರು ಖಾಸಗಿ ವ್ಯಕ್ತಿಗಳು ಮತ್ತು ಸಂಸ್ಥೆಗಳು ಪಿ.ಯು.ಸಿ ವಿದ್ಯಾರ್ಥಿಗಳಿಗೆ ಕೋಚಿಂಗ್ ಸೆಂಟರ್‌ಗಳು ಮತ್ತು ಟ್ಯೂಷನ್ ಸಂಸ್ಥೆಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಕೇಂದ್ರಗಳಿಗೆ ಸರ್ಕಾರ ಮಾನ್ಯತೆ ನೀಡಿದೆಯೇ; ಮಾನ್ಯತೆ ನೀಡುವ ಮೊದಲು ಇವರುಗಳಿಗೆ ಸರ್ಕಾರ ವಿಧಿಸಿರುವ ನಿಯಮಗಳು ಮತ್ತು ನಿಬಂಧನೆಗಳೇನು;

ಇ) ಇಲಾಖೆಯಲ್ಲಿ ನೊಂದಣಿ ಮಾಡಿಸಿರುವ ಕೋಚಿಂಗ್ ಸೆಂಟರ್ ಮತ್ತು ಟ್ಯೂಷನ್ ಸಂಸ್ಥೆಗಳೆಷ್ಟು (ಹೆಸರು, ವಿಳಾಸದ ವಿವರಗಳನ್ನು ಒದಗಿಸುವುದು);